**ಕರ್ನಾಟಕ ಸರ್ಕಾರ**

ಸಂಖ್ಯೆ: ಕಂಇ/65/ಎಂಎನ್‌ಎಂಯು/2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:05-04-2021

## ಸುತ್ತೋಲೆ

ವಿಷಯ: ವಿವಾಹ ನೋಂದಣಿ ಸಮಯದಲ್ಲಿ ವಯಸ್ಸಿನ ದಾಖಲಾತಿಗಾಗಿ ಪಡೆಯಬಹುದಾದ ಪ್ರಮಾಣಪತ್ರದ ಕುರಿತು.

ಉಲ್ಲೇಖ: 1) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸುತ್ತೋಲೆ ಸಂ: ಮಮಇ 109 ಮಭಾಬ 2017 ದಿನಾಂಕ:01.08.2018.

2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ಇವರ ಅಧ್ಯಕ್ಷತೆಯಲ್ಲಿ ಬಾಲ್ಯ ವಿವಾಹಗಳನ್ನು ತಡೆಗಟ್ಟುವ ರಾಜ್ಯ ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಭೆಯ ದಿ:22.01.2020ರ ನಡಾವಳಿ.

* * * * *

ವಿವಾಹ ನೋಂದಣಾಧಿಕಾರಿಗಳು Registration of Hindu marriage(Karnataka) Rules 1966ರ ನಿಯಮ 4ರನ್ವಯ ವಿವಾಹ ನೋಂದಣಿಗಾಗಿ ಅರ್ಜಿ ಸಲ್ಲಿಸುವ ಅರ್ಜಿದಾರರಿಂದ ಪಡೆಯಬಹುದಾದ ದಾಖಲೆಗಳನ್ನು ನಿಗದಿಪಡಿಸಿ ಉಲ್ಲೇಖ(1)ರ ಸುತ್ತೋಲೆಯಲ್ಲಿ ತಿಳಿಸಲಾಗಿರುತ್ತದೆ.

ದಿನಾಂಕ:22.01.2020ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ಇವರ ಅಧ್ಯಕ್ಷತೆಯಲ್ಲಿ ನಡೆದ ಬಾಲ್ಯ ವಿವಾಹಗಳನ್ನು ತಡೆಯುವ ರಾಜ್ಯ ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಭೆಯಲ್ಲಿ ವಿವಾಹ ನೋಂದಣಿ ಸಮಯದಲ್ಲಿ ವಯಸ್ಸಿನ ದಾಖಲಾತಿಗಾಗಿ ಜನನ ಪ್ರಮಾಣಪತ್ರ, ಶಾಲಾ ದೃಢೀಕರಣ ಪತ್ರ, ಇವೆರೆಡೂ ಲಭ್ಯವಿಲ್ಲದ ಸಂದರ್ಭದಲ್ಲಿ ವೈದ್ಯಕೀಯ ಪ್ರಮಾಣಪತ್ರಗಳನ್ನು ಮಾತ್ರ ಪರಿಗಣಿಸುವಂತೆ ಆಧಾರ್ ಕಾರ್ಡ್, ಎಪಿಕ್ ಕಾರ್ಡ್ ಇನ್ನಿತರೆ ದಾಖಲೆಗಳನ್ನು ಪರಿಗಣಿಸಬಾರದೆಂದು ನಿರ್ಣಯಿಸಲಾಗಿರುತ್ತದೆ.

ಮೇಲಿನ ನಿರ್ಣಯದಂತೆ ಎಲ್ಲಾ ನೋಂದಣಾಧಿಕಾರಿಗಳು, ವಿವಾಹ ನೋಂದಣಿ ಸಮಯದಲ್ಲಿ ವಯಸ್ಸಿನ ದಾಖಲಾತಿಗಾಗಿ, ಜನನ ಪ್ರಮಾಣ ಪತ್ರ, ಶಾಲಾ ದೃಢೀಕರಣ ಪತ್ರ ಇವೆರೆಡೂ ಲಭ್ಯವಿಲ್ಲದ ಸಂದರ್ಭದಲ್ಲಿ ವೈದ್ಯಕೀಯ ಪ್ರಮಾಣಪತ್ರಗಳನ್ನು ಮಾತ್ರ ಪರಿಗಣಿಸುವಂತೆ ಇನ್ನುಳಿದಂತೆ ಆಧಾರ್ ಕಾರ್ಡ್, ಎಪಿಕ್ ಕಾರ್ಡ್ ಇನ್ನಿತರೆ ದಾಖಲೆಗಳನ್ನು ಪರಿಗಣಿಸಬಾರದೆಂದು ಸೂಚಿಸಿದೆ.

560009.

(ಎನ್.ಮಂಜುನಾಥ ಪ್ರಸಾದ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಕಂದಾಯ ಇಲಾಖೆ

6/4/2021

ಇವರಿಗೆ,

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರು, ಕಂದಾಯ ಭವನ, ಬೆಂಗಳೂರು.
4) ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5) ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6) ಎಲ್ಲಾ ಜಿಲ್ಲಾ ನೋಂದಣಾಧಿಕಾರಿಗಳು, ನೋಂದಣಿ ಮತ್ತು ಮುದ್ರಾಂಕ ಇಲಾಖೆ – ಐಜಿಆರ್ ರವರ ಮುಖಾಂತರ.
7) ಶಾಖಾ ರಕ್ಷ ಕಡತ/ ಹೆಚ್ಚುವರಿ ಪ್ರತಿಗಳು.

Scanned with CamScanner